ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಮೈಸೂರು ನಗರದ ಕ್ರಾಫರ್ಡ್ ಹಾಲ್ ಹಿಂಭಾಗ ಕುಕ್ಕರಹಳ್ಳಿ ಕೆರೆಗೆ ಸೇರುವ ರಸ್ತೆ ಕಾಮಗಾರಿ ವಿಳಂಬದ ಬಗ್ಗೆ

ಶ್ರೀಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ) :-

822 (682) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ನಗರದ ಕ್ರಾಫರ್ಡ್ ಹಾಲ್ ಹಿಂಭಾಗದಲ್ಲಿ ಕುಕ್ಕರಹಳ್ಳಿ ಕೆರೆಗೆ ಸೇರುವ ರಸ್ತೆಯಲ್ಲಿರುವ (ಸರ್ ಎಸ್. ರಾಧಾಕೃಷ್ಣನ್ ಮಾರ್ಗ) ರೈಲ್ವೆ ಲೆವೆಲ್ ಕ್ರಾಸಿಂಗ್‌ನಲ್ಲಿ, ರೈಲ್ವೆ ಮೇಲು ಸೇತುವೆ ನಿರ್ಮಾಣ ಕಾಮಗಾರಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ;

(ಆ) ಮೈಸೂರು ರೈಲು ನಿಲ್ದಾಣದಲ್ಲಿ ರೈಲು ನಿಲ್ಲಲು ಜಾಗ ಇಲ್ಲದಾಗ ಅನೇಕ ರೈಲುಗಳು ಈ ರೈಲ್ವೆ ಲೆವೆಲ್ ಕ್ರಾಸಿಂಗ್ ಮೇಲೆಯೇ ನಿಲ್ಲುವುದರಿಂದ ಪ್ರತಿನಿತ್ಯ ವಾಹನ ಸಂಚಾರಕ್ಕೆ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೈಲ್ವೆ ಮೇಲುಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗಿದೆಯೇ ?